*ಮಾನ್ಯ ನಗರಾಭಿವೃದ್ಧಿ ಸಚಿವರು ರವರು

ಸ್ಮಾರ್ಟ್ ಸಿಟಿ ಯೋಜನೆಯ ಕಾಮಗಾರಿಗಳ ತಪಾಸಣೆ ನಡೆಸಿರುವ ಬಗ್ಗೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ಕೈಗೆತ್ತಿಕೊಂಡಿರುವ ವಿವಿಧ ಕಾಮಗಾರಿಗಳನ್ನು ಮಾನ್ಯ ನಗರಾಭಿವೃದ್ಧಿ ಸಚಿವರು ಶ್ರೀ ಭೈರತಿ ಬಸವರಾಜು ರವರು ಇಂದು ತಪಾಸಣೆ ನಡೆಸಿದರು. ಈ ವೇಳೆ ಅಪರ ಮುಖ್ಯ ಕಾರ್ಯದರ್ಶಿ(ನಗರಾಭಿವೃದ್ಧಿ ಇಲಾಖೆ) ಶ್ರೀ ರಾಕೇಶ್ ಸಿಂಗ್, ಸ್ಮಾರ್ಟ್ ಸಿಟಿ ಲಿ. ವ್ಯವಸ್ಥಾಪಕ ನಿರ್ದೇಶಕರು ಶ್ರೀ ರಾಜೇಂದ್ರ ಚೋಳನ್, ಮುಖ್ಯ ಅಭಿಯಂತರರು(ಸ್ಮಾರ್ಟ್ ಸಿಸಿ) ಶ್ರೀ ರಂಗನಾಥ ನಾಯ್ಕ್, ಗುತ್ತಿಗೆದಾರರು ಹಾಗೂ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ರೇಸ್ ಕೋರ್ಸ್ ರಸ್ತೆ ತಪಾಸಣೆ:

ಮೊದಲಿಗೆ ರೇಸ್ ಕೋರ್ಸ್ ರಸ್ತೆ ಮಾರ್ಗದಲ್ಲಿ ನಡೆಯುತ್ತಿರುವ ಕಾಮಗಾರಿಯನ್ನು ತಪಾಸಣೆ ನಡೆಸಿದ ನಗರಾಭಿವೃದ್ಧಿ ಸಚಿವರು, ನಗರದ ಕೇಂದ್ರ ಭಾಗದ ಪ್ರಮುಖ ರಸ್ತೆಗಳಾಗಿವುದರಿಂದ ಸ್ಮಾರ್ಟ್ ಸಿಟಿ ವತಿಯಿಂದ ಕೈಗೊಂಡಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕೆಂದು ಗುತ್ತಿಗೆದಾರರಿಗೆ ತಾಕೀತು ಮಾಡಿದರು.

ಸ್ಮಾರ್ಟ್ ಸಿಟಿ ವತಿಯಿಂದ ಕಾಮಗಾರಿ ನಡೆಯುತ್ತಿರುವ ರಸ್ತೆಗಳಲ್ಲಿ ಹೆಚ್ಚುವರಿ ಸಿಬ್ಬಂದಿ ಹಾಗೂ ಅವಶ್ಯಕ ಯಂತ್ರೋಪಕರಣಗಳನ್ನು ಬಳಕೆ ಮಾಡಿಕೊಂಡು ತ್ವರಿತವಾಗಿ ಕಾಮಗಾರಿಯನ್ನು ಮುಗಿಸಬೇಕು ಎಂದು ಸೂಚನೆ ನೀಡಿದರು.

ಜವಾಹರಲಾಲ್ ನೆಹರು ತಾರಾಲಯ ಮತ್ತು ರಾಜಭವನ ರಸ್ತೆ ತಪಾಸಣೆ:

ಜವಾಹರಲಾಲ್ ನೆಹರು ತಾರಾಲಯ ಮತ್ತು ರಾಜಭವನ ರಸ್ತೆಯಲ್ಲಿ ನಡೆಯುತ್ತಿರುವ ಕಾಮಗಾರಿ ತಪಾಸಣೆ ನಡೆಸಿ ಪಾದಚಾರಿ ಮಾರ್ಗದಲ್ಲಿ ಬೆಸ್ಕಾಂ, ಒ.ಎಫ್.ಸಿಗೆ ಡಕ್ಟ್ ಅಳವಡಿಕೆ, ಸೀವೇಜ್ ಮತ್ತು ಪೈಪ್ ಲೈನ್ ಅಳವಡಿಕೆ, ನೀರುಗಾಲುವೆ ಪೈಪ್ ಅಳವಡಿಕೆ ಕಾಮಗಾರಿ ತ್ವರಿತವಾಗಿ ಮುಗಿಸಿ, ಪಾದಚಾರಿ ಮಾರ್ಗದಲ್ಲಿ ಕರ್ಬ್ ಸ್ಟೋನ್ಸ್ ಅಳವಡಿಕೆ ಹಾಗೂ ಚೇಂಬರ್ಸ್ ಸರಿಯಾಗಿ ಮುಚ್ಚಬೇಕು ಎಂದು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಪಾದಚಾರಿ ಮಾರ್ಗದಲ್ಲಿರುವ ಗಿಡ/ಮರಗಳ ಸುತ್ತಲು ನೀರು ನಿಲ್ಲಲು ಸರಿಯಾದ ವ್ಯವಸ್ಥೆ ಮಾಡಬೇಕು. ಬೀದಿ ದೀಪಗಳನ್ನು ಸಮರ್ಪಕವಾಗಿ ಅಳವಡಿಸಬೇಕು. ಪಾದಚಾರಿ ಮಾರ್ಗದಲ್ಲಿರುವ ಡೆಬ್ರಿಸ್/ಮಣ್ಣು ರಾಶಿಯನ್ನು ಕೂಡಲೆ ತೆಗೆಯಲು ಸೂಚನೆ ನೀಡಿದರು. ರಾಜಭವನದ ಪಕ್ಕ ಪಾದಚಾರಿ ಮಾರ್ಗದಲ್ಲಿ ಮಣ್ಣು ರಾಶಿ ತೆಗೆದು ಹದಿನೈದು ದಿನಗಳಲ್ಲಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಇನ್‌ಫೆಂಟ್ರಿ ರಸ್ತೆ ತಪಾಸಣೆ:

ರಸ್ತೆಯ ಎರಡೂ ಇಕ್ಕೆಲಗಳಲ್ಲಿ ಅಗೆದಿರುವುದರಿಂದ ಸಾರ್ವಜನಿಕರು ಹಾಗೂ ವಾಹನ ಸವಾರರಿಗೆ ತೀರಾ ಸಮಸ್ಯೆಯಾಗುತ್ತಿದ್ದು, ತ್ವರಿತವಾಗಿ ಒಂದು ಭಾಗವನ್ನು ಪೂರ್ಣಗೊಳಿಸಲು ಸೂಕ್ತ ಕ್ರಮಕೈಗೊಳ್ಳಬೇಕು. ಈ ಬಗ್ಗೆ ಕಾಲ ಕಾಲಕ್ಕೆ ಕೆಲಸದ ವರದಿ ನೀಡಬೇಕು. ಅಲ್ಲದೆ ಜನವರಿ ಅಂತ್ಯದೊಳಗಾಗಿ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರಿಗೆ ತಾಕೀತು ಮಾಡಿದರು.

ಕಮರ್ಷಿಯಲ್ ಸ್ಟ್ರೀಟ್ ತಪಾಸಣೆ:

ಕಮರ್ಷಿಯಲ್ ಸ್ಟ್ರೀಟ್‌ನಲ್ಲಿ 460 ಮೀಟರ್ ಉದ್ದದ ರಸ್ತೆ ಕಾಮಗಾರಿ ಕೈಗೆತ್ತಿಕೊಂಡಿದ್ದು, ಪಾದಚಾರಿ ಮಾರ್ಗದಲ್ಲಿ ಸೀವೇಜ್, ಪೈಪ್ ಲೈನ್ ಕಾಮಗಾರಿ ಮುಗಿದಿದ್ದು, ರಸ್ತೆಗೆ ಕೂಡಲೆ ಡಾಂಬರು ಹಾಕಿ ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಬೇಕು. ಈ ಸಂಬಂಧ ರಸ್ತೆಯಲ್ಲಿ ಎರಡು ದಿನ ವಾಹನ ನಿಲುಗಡೆಯಾಗದಂತೆ ನೋಡಿಕೊಳ್ಳಲು ಸಂಚಾರಿ ಪೊಲೀಸ್ ವಿಭಾಗದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮೊದಲು ಒಂದು ಭಾಗದ ಕಾಮಗಾರಿ ಮುಗಿಸಿ ತದನಂತರ ಮತ್ತೊಂದು ಭಾಗ ಕೈಗೆತ್ತಿಕೊಳ್ಳಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಡಿಕನ್ಸನ್ ರಸ್ತೆ ತಪಾಸಣೆ:

ಡಿಕನ್ಸನ್ ರಸ್ತೆಯಲ್ಲಿ ಎರಡೂ ಕಡೆ ಅಗೆದಿರುವುದರಿಂದ ವಾಹನಗಳ ಸಂಚಾರಕ್ಕೆ ತೀರಾ ಸಮಸ್ಯೆ ಆಗುತ್ತಿದೆ. ಸರಿಯಾಗಿ ಬ್ಯಾರಿಕೇಡ್, ನೆಟ್, ರಾತ್ರಿ ವೇಳೆ ವಿದ್ಯುತ್ ದೀಪಗಳನ್ನು ಅಳವಡಿಸಿಲ್ಲ. ಇದರಿಂದ ವಾಹನಗಳ ಓಡಾಡಕ್ಕೆ ತೀರಾ ಸಮಸ್ಯೆ ಆಗುತ್ತಿದ್ದು, ಕೂಡಲೆ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಬೇಕು. ರಸ್ತೆಯ ಒಂದು ಭಾಗ ಕೂಡಲೆ ಮುಗಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ರಸ್ತೆಯಲ್ಲಿ ಬಿದ್ದಿರುವ ಡೆಬ್ರಿಸ್ ಕೂಡಲೆ ತೆರವುಗೊಳಿಸಬೇಕು. ಬಾಕಿಯಿರುವ ಪೈಪ್ ಲೈನ್ ಕಾಮಗಾರಿ ಕೂಡಲೆ ಮುಗಿಯಬೇಕು. ಸರಿಯಾಗಿ ಕೆಲಸ ಮಾಡಿಲ್ಲ ಅಂದರೆ ಗುತ್ತಿಗೆದಾರರಿಗೆ ನೋಟೀಸ್ ಜಾರಿಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ವೇಳೆ ಸರಿಯಾಗಿ ಕೆಲಸ ಮಾಡಿಸದ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡು ಗುತ್ತಿಗೆದಾರರಿಂದ ತ್ವರಿವಾಗಿ ಕೆಲಸ ಮಾಡಿಸುವಂತೆ ಸೂಚನೆ ನೀಡಿದರು.

ಹಲಸೂರು ರಸ್ತೆ ತಪಾಸಣೆ:

ಹಲಸೂರು ರಸ್ತೆಯ ಇಕ್ಕೆಲಗಳಲ್ಲಿ ಅಗೆದು ಕಾಮಗಾರಿ ನಡೆಸದೆ ಹಾಗೆಯೇ ಬಿಟ್ಟಿರುವುದರಿಂದ ಪಾದಚಾರಿ ಹಾಗೂ ವಾಹನಗಳ ಓಡಾಟಕ್ಕೆ ತುಂಬಾ ಅನಾನೂಕೂಲವಾಗಿದ್ದು, ಕೂಡಲೆ ರಸ್ತೆ ಮಾರ್ಗದಲ್ಲಿ ಬ್ಯಾರಿಕೇಡ್, ನೆಟ್ ಅಳವಡಿಸಬೇಕು. ಸಾರ್ವಜನಿಕರಿಗೆ ಯಾವುದೇ ಸಮಸ್ಯೆ ಆಗದಂತೆ ತ್ವರಿತವಾಗಿ ಕೆಲಸ ಮುಗಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಮಿಲ್ಲರ್ಸ್ ರಸ್ತೆ(Extension Road) ತಪಾಸಣೆ:

ಮಿಲ್ಲರ್ಸ್ ರಸ್ತೆಯ ಸಂಪೂರ್ಣ ಒಂದು ಮಾರ್ಗ ಕಾಮಗಾರಿ ನಡೆಯುತ್ತಿದ್ದು, ಕೂಡಲೆ ಕೆಲಸ ಮುಗಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು. ಒಂದು ಕಡೆ ಪಾದಚಾರಿ ಮಾರ್ಗದ ಕಾಮಗಾರಿ ಮುಗಿದಿದ್ದು, ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಸೂಚನೆ ನೀಡಿದರು.

ಕ್ವೀನ್ಸ್ ರಸ್ತೆ ತಪಾಸಣೆ:

ಪಾದಚಾರಿ ಮಾರ್ಗದಲ್ಲಿ ಕೂಡಲೆ ನೀರುಗಾಲುವೆ ಪೈಪ್ ಲೈನ್ ಕಾಮಗಾರಿ ಮುಗಿಸಬೇಕು. ಈ ರಸ್ತೆ ಮಾರ್ಗದಲ್ಲಿ ಹೆಚ್ಚು ವಾಹನಗಳ ಓಡಾಟವಿರುವುದರಿಂದ ಹೆಚ್ಚುವರಿ ಸಿಬ್ಬಂದಿಯನ್ನು ನಿಯೋಜನೆ ಮಾಡಿಕೊಂಡು ಎರಡು ಪಾಳಿಯಲ್ಲಿ ಕೆಲಸ ಮಾಡಿ ತ್ವರಿತವಾಗಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಲ್ಯಾವೆಲ್ಲೆ ರಸ್ತೆ ತಪಾಸಣೆ:

ಲ್ಯಾವೆಲ್ಲೆ ರಸ್ತೆಯಲ್ಲಿ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಮೂರು ಬ್ಯಾಚ್ ಗಳನ್ನು ಮಾಡಿ ನಿರಂತರವಾಗಿ ಕೆಲಸ ಮಾಡಲಾಗಿದ್ದು, ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ ಹಾಗೂ ರಸ್ತೆ ಇಕ್ಕೆದಲ್ಲಿರುವ ಮಣ್ಣಿನ ರಾಶಿಯನ್ನು ಟ್ರ್ಯಾಕ್ಟರ್ ಮೂಲಕ ರಾತ್ರಿ ವೇಳೆ ತೆರವು ಮಾಡಿಸಲಾಗುವುದು ಎಂದು ಮುಖ್ಯ ಇಂಜಿನಿಯರ್ ಮಾಹಿತಿ ನೀಡಿದರು. ಅದಕ್ಕೆ ನಗರಾಭಿವೃದ್ಧಿ ಸಚಿವರು ಪ್ರತಿಕ್ರಿಯಿಸಿ, ಕೂಡಲೆ ಪೈಪ್ ಲೈನ್  ಹಾಗೂ ಡಕ್ಟ್ ಅಳವಡಿಕೆ ಕಾಮಗಾರಿ ಪೂರ್ಣಗೊಳಿಸಿ ಆದಷ್ಟು ಬೇಗ ಸಂಪೂರ್ಣ ಕಾಮಗಾರಿ ಮುಗಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಮೆಗ್ರಾತ್ ರಸ್ತೆ ತಪಾಸಣೆ:

ಮೆಗ್ರಾತ್ ರಸ್ತೆದಲ್ಲಿ ಕೆಲ ಭಾಗ ಪಾದಚಾರಿ ಕಾಮಗಾರಿ ಪೂರ್ಣಗೊಂಡೊದ್ದು, ಇನ್ನೂ ಕೆಲ ಭಾಗವನ್ನು ತ್ವರಿತವಾಗಿ ಪೂರ್ಣಗೊಳಿಸಲು ಸೂಚನೆ ನೀಡಿದರು. ಇದೇ ವೇಳೆ ಹಾಸ್ ಮ್ಯಾಟ್ ಆಸ್ಪತ್ರೆ ಬಳಿ ಕಸದ ರಾಶಿ ಹಾಕಿರುವುದನ್ನು ಕಂಡು, ಅದನ್ನು ಕೂಡಲೆ ತೆಗೆಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಿಯಾನ್ಸ್ ರಸ್ತೆ ತಪಾಸಣೆ:

ರಿಯಾನ್ಸ್ ರಸ್ತೆ ಒಂದು ಮಾರ್ಗದ ಸಂಚಾರ ನಿರ್ಭಂಧಿಸಲಾಗಿದೆ. ಮೀಡಿಯನ್ಸ್ ಭಾಗದಲ್ಲಿ ಸಸಿಗಳ ರಕ್ಷಣೆಗೆ ಎತ್ತರವಾಗಿ ಆರ್.ಸಿ.ಸಿ ಗೋಡೆ ನಿರ್ಮಿಸಬೇಕು ಎಂದು ಸೂಚನೆ ನೀಡಿದರು.

ರಾಜಾರಾಮ್ ಮೋಹನ್ ರಾಯ್ ರಸ್ತೆ ತಪಾಸಣೆ:

ಕೊನೆಯದಾಗಿ ರಾಜಾರಾಮ್ ಮೋಹನ್ ರಾಯ್ ರಸ್ತೆ ತಪಾಸಣೆ ನಡೆಸಿದ ನಗರಾಭಿವೃದ್ಧಿ ಸಚಿವರು, ಪಾದಚಾರಿ ಮಾರ್ಗದಲ್ಲಿ ಕಾಮಗಾರಿ ನಡೆಯುತ್ತಿರುವ ಕಡೆ ಸುರಕ್ಷಾ ಕ್ರಮಗಳನ್ನು ಕೈಗೊಂಡು ಕೆಲಸ ಮಾಡಲು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಹೆಚ್ಚಿನ ಮಾಹಿತಿಗಾಗಿ ಮಾನ್ಯ ನಗರಾಭಿವೃದ್ಧಿ ಸಚಿವರು ಸುದ್ದಿಗೋಷ್ಠಿಯಲ್ಲಿ ಮಾತನಾಡಿರುವ ಆಡಿಯೋ ಬೈಟ್ ಅನ್ನು ಲಗತ್ತಿಸಿದೆ.